I/672852/2024

**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಟಿಟಿಇ/03/ಇಪಿಎಸ್(1)/2024

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 12.09.2024.

**ಜ್ಞಾಪನ**

ವಿಷಯ: ಕರ್ನಾಟಕ ಲೋಕಸೇವಾ ಆಯೋಗವು ವಿವಿಧ ಇಲಾಖೆಗಳ ಗ್ರೂಪ್-ಬಿ ವೃಂದದ ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುತ್ತಿದ್ದು, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಪರೀಕ್ಷೆ ನಡೆಯುವ ಇಂಜನಿಯರಿಂಗ್/ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು/ ಸಿಬ್ಬಂದಿಗಳು ಪರೀಕ್ಷಾ ದಿನಾಂಕಗಳಂದು ಪರೀಕ್ಷಾ ಕಾರ್ಯವನ್ನು ನಿರ್ವಹಿಸುವ ಬಗ್ಗೆ

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಇವರ ಅರೆಸರ್ಕಾರಿ ಪತ್ರ ಸಂಖ್ಯೆ: ಆರ್(1)601/2024-25/ಪಿಎಸ್ ಸಿ, ದಿನಾಂಕ: 03.09.2024.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಅರೆಸರ್ಕಾರಿ ಪತ್ರದಲ್ಲಿ ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 13.03.2024 ರಂದು ಅಧಿಸೂಚಿಸಿರುವ ವಿವಿಧ ಇಲಾಖೆಗಳ ಗ್ರೂಪ್-ಬಿ ವೃಂದದ ಉಳಿಕೆ ಮೂಲ ವೃಂದದಲ್ಲಿನ ಹುದ್ದೆಗಳಿಗೆ ದಿನಾಂಕ: 14.09.2024, 15.09.2024, 18.09.2024, 19.09.2024, 26.09.2024, 27.09.2024, 05.10.2024, 06.10.2024, 26.10.2024 ಮತ್ತು 10.11.2024 ರಂದು ನಡೆಸಲು ಉದ್ದೇಶಿಸಿದ್ದು, ಮೊದಲ ಹಂತದಲ್ಲಿ ದಿನಾಂಕ: 14.09.2024 ಮತ್ತು 15.09.2024 ರಂದು ಬೆಂಗಳೂರು, ತುಮಕೂರು, ಮೈಸೂರು, ಮಂಡ್ಯ, ಶಿವಮೊಗ್ಗ, ದಾವಣಗೆರೆ, ಕಲಬುರಗಿ, ಬಳ್ಳಾರಿ, ಕೊಪ್ಪಳ, ರಾಯಚೂರು, ಬೆಳಗಾವಿ ಮತ್ತು ಧಾರವಾಡ ಕೇಂದ್ರಗಳಲ್ಲಿ ಹಾಗೂ ದಿನಾಂಕ: 18.09.2024 ಮತ್ತು 19.09.2024 ರಂದು ಬೆಂಗಳೂರು, ಕಲಬುರಗಿ, ಬೆಳಗಾವಿ, ಮೈಸೂರು, ಮತ್ತು ಶಿವಮೊಗ್ಗ ಕೇಂದ್ರಗಳಲ್ಲಿ ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗಳನು ವಿವಿಧ ಕಾಲೇಜುಗಳಲ್ಲಿ ನಡೆಸಲಾಗುತ್ತಿದ್ದು, ಸದರಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರು/ಸಿಬ್ಬಂದಿಗಳು ಮೇಲ್ಕಂಡ ದಿನಾಂಕಗಳಂದು ನಿಯೋಜಿಸುವ ಪರೀಕ್ಷಾ ಕಾರ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವಂತೆ ಸಂಬಂಧಿತ ಕಾಲೇಜುಗಳ ಮುಖ್ಯಸ್ಥರುಗಳಿಗೆ ಕೂಡಲೇ ನಿರ್ದೇಶನ ನೀಡಲು ಕೋರಿರುತ್ತಾರೆ.

ಪ್ರಯುಕ್ತ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಈ ಕೆಳಕಂಡ ಇಂಜನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳಲ್ಲಿ ಸದರಿ ಪರೀಕ್ಷಾ ದಿನಾಂಕಗಳಂದು ಸಂಸ್ಥೆಗಳಲ್ಲಿ ಯಾವುದೇ ರೀತಿಯ ಪಠ್ಯ/ಪಠ್ಯೇತರ ಚಟುವಟಿಕೆಗಳನ್ನು ನಡೆಸಬಾರದೆಂದು ತಿಳಿಸಲಾಗಿದೆ.

1. ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು.
2. ಸರ್ಕಾರಿ ಇಂಜನಿಯರಿಂಗ್ ಕಾಲೇಜು, ರಾಯಚೂರು.
3. ನವೋದಯ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ರಾಯಚೂರು.
4. ಸರ್ಕಾರಿ ಪಾಲಿಟೆಕ್ನಿಕ್, ಕೊಪ್ಪಳ.
5. ಸರ್ಕಾರಿ ಮಹಿಳಾ ವಸತಿ ಪಾಲಿಟೆಕ್ನಿಕ್, ಶಿವಮೊಗ್ಗ.
6. ಸಿದ್ದಗಂಗಾ ಪಾಲಿಟೆಕ್ನಿಕ್, ತುಮಕೂರು.
7. ಸಿದ್ದಗಂಗಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ತುಮಕೂರು.
8. ಶ್ರೀದೇವಿ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ತುಮಕೂರು.
9. ಶ್ರೀ ಸಿದ್ದಾರ್ಥ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ತುಮಕೂರು.
10. ಜೆ.ಎಸ್.ಎಸ್ ವಿಶೇಷಚೇತನರ ಪಾಲಿಟೆಕ್ನಿಕ್, ಮೈಸೂರು.
11. ಜಿ.ಎಂ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ದಾವಣಗೆರೆ.
12. ಎಸ್.ಸಿ.ಟಿ ಪಾಲಿಟೆಕ್ನಿಕ್, ಬೆಂಗಳೂರು.

ಮುಂದುವರೆದು, ಸದರಿ ಪರೀಕ್ಷಾ ದಿನಾಂಕಗಳಂದು ಸಂಸ್ಥೆಯಲ್ಲಿನ ಅಧಿಕಾರಿ/ಸಿಬ್ಬಂದಿಯವರಿಗೆ ಯಾವುದೇ ರೀತಿಯ ರಜೆ ಮಂಜೂರು ಮಾಡದೆ, ಸದರಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ಸಂಸ್ಥೆಗಳಲ್ಲಿನ ಉಪನ್ಯಾಸಕರು/ಸಿಬ್ಬಂದಿಗಳ ನೆರವಿನೊಂದಿಗೆ ಕಾಲೇಜಿನ ಕಟ್ಟಡ/ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರ ವಹಿಸಿ, ಪರೀಕ್ಷೆಯನ್ನು

CamScanner

I/672852/2024

ಯಶಸ್ವಿಯಾಗಿ ನಡೆಸಲು ಸಹಕರಿಸುವಂತೆ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ. ಸದರಿ ದಿನಗಳಂದು ನಡೆಸಬೇಕಾಗಿದ್ದ ತರಗತಿಗಳನ್ನು ಮುಂದಿನ ದಿನಗಳಲ್ಲಿ ವಿಶೇಷ ತರಗತಿಗಳನ್ನು ಜರುಗಿಸಿ ಪಾಠ ಪ್ರವಚನಗಳನ್ನು ಪೂರೈಸಲು ಹಾಗೂ ವಿಶೇಷ ತರಗತಿಗಳನ್ನು ಜರುಗಿಸಿದ ಬಗ್ಗೆ ವರದಿಯನ್ನು ತಾಂತ್ರಿಕ ಪರೀಕ್ಷಾ ಮಂಡಳಿಗೆ ಸಲ್ಲಿಸಲು ಸೂಚಿಸಲಾಗಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

13/9/24

ಇವರಿಗೆ:

ಮೇಲ್ಕಂಡ ಸಂಸ್ಥೆಯ ಪ್ರಾಚಾರ್ಯರುಗಳಿಗೆ - ಮುಂದಿನ ಅಗತ್ಯ ಕ್ರಮಕ್ಕಾಗಿ.

ಪ್ರತಿ:

1. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು - ಮಾಹಿತಿಗಾಗಿ.
2. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ - ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು.

CamScanner